**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪ್ರತಾಪ್ ಸಿಂಹ ನಾಯಕ್ .ಕೆ ರವರು ನಿಯಮ 330ರಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ವೈಷ್ಣೋದೇವಿ' ದೇವಾಲಯವು ತ್ರಿಕೂಟ ಪರ್ವತಗಳಲ್ಲಿರುವ ಒಂದು ಹಿಂದೂ ದೇವಾಲಯವಾಗಿದ್ದು, ದುರ್ಗಾದೇವಿಯ ಅವತಾರವಾದ 'ವೈಷ್ಣೋದೇವಿ' ದೇವಾಲಯ 108 ಶಕ್ತಿ ಪೀಠಗಳಲ್ಲಿ ಒಂದಾಗಿದ್ದು, ಭಾರತದ ಅತ್ಯಂತ ಪ್ರಖ್ಯಾತ ಯಾತ್ರಾ ಸ್ಥಳಗಳಲ್ಲಿ ಕೂಡ ಒಂದಾಗಿದ್ದು, 'ವೈಷ್ಣೋದೇವಿ' ಯಾತ್ರೆ ಕೈಗೊಳ್ಳಬೇಕೆಂಬುದು ಬಹುತೇಕ ಜನಸಾಮಾನ್ಯರ ಆಶೆ ಮತ್ತು ಬಯಕೆಯಾಗಿರುತ್ತದೆ.**

**ರಾಜ್ಯ ಮುಜರಾಯಿ ಇಲಾಖೆಯಿಂದ 'ಕಾಶಿ' ಯಾತ್ರೆ ಮಾದರಿಯಲ್ಲಿಯೇ 'ವೈಷ್ಣೋದೇವಿ' ಯಾತ್ರೆಗೂ ಸಹಾಯಧನ ನೀಡಬೇಕೆಂಬ ಬೇಡಿಕೆ ಬಹುಕಾಲದಿಂದ ಇದ್ದರೂ ಸರ್ಕಾರ ಇದುವರೆಗೆ ಯಾವುದೇ ಅಗತ್ಯ ಕ್ರಮ ವಹಿಸದೇ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ನಿಯಮ 330ರ ಅಡಿಯಲ್ಲಿ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಗಮನ ಸೆಳೆದಿರುತ್ತಾರೆ.**

**ಉತ್ತರ:-**

ಕರ್ನಾಟಕ ರಾಜ್ಯದಿಂದ ಕೈಲಾಸ ಮಾನಸ ಸರೋವರ ಯಾತ್ರೆ ಕೈಗೊಂಡ ಯಾತ್ರಾರ್ಥಿಗಳಿಗೆ ತಲಾ ರೂ.30,000/- ಹಾಗೂ ಚಾರ್‌ಧಾಮ್ ಯಾತ್ರೆ ಕೈಗೊಂಡ ಯಾತ್ರಾರ್ಥಿಗಳಿಗೆ ತಲಾ ರೂ.20,000/- ಹಾಗೂ ಕಾಶಿ ಯಾತ್ರೆ ಕೈಗೊಂಡ ಯಾತ್ರಾರ್ಥಿಗಳಿಗೆ ತಲಾ ರೂ.5,000/-ಸಹಾಯಧನವನ್ನು ಸರ್ಕಾರದಿಂದ ನೀಡಲಾಗುತ್ತಿದೆ.

ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:13.11.2024 ರಂದು ನಡೆದ ರಾಜ್ಯ ಧಾರ್ಮಿಕ ಪರಿಷತ್ತಿನ ಸಭೆಯಲ್ಲಿ ಕರ್ನಾಟಕ ರಾಜ್ಯದಿಂದ "ಶ್ರೀ ಮಾತಾ ವೈಷ್ಣೋದೇವಿ" ದೇವಾಲಯಕ್ಕೆ ಭೇಟಿ ನೀಡುವ 45 ವರ್ಷಗಳ ಮೇಲ್ಪಟ್ಟ ಯಾತ್ರಾರ್ಥಿಗಳಿಗೆ ತಲಾ ರೂ.5,000/-ಗಳ ಸಹಾಯಧನವನ್ನು ವಿತರಿಸುವ ಯೋಜನೆಯನ್ನು ಜಾರಿಗೆ ತರಲು ತೀರ್ಮಾನಿಸಲಾಗಿರುತ್ತದೆ.

ಮುಂದುವರೆದು, 2026-27ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-441ರಲ್ಲಿ ಈ ಕೆಳಕಂಡಂತೆ ಘೋಷಣೆಯಾಗಿರುತ್ತದೆ:

**"ಕರ್ನಾಟಕ ರಾಜ್ಯದಿಂದ "ಶ್ರೀ ಮಾತಾ ವೈಷ್ಣೋದೇವಿ" ದೇವಾಲಯಕ್ಕೆ ಯಾತ್ರೆ ಕೈಗೊಳ್ಳುವ ಯಾತ್ರಾರ್ಥಿಗಳಿಗೆ ಸರ್ಕಾರದಿಂದ ತಲಾ 5,000 ರೂ.ಗಳ ಸಹಾಯಧನವನ್ನು ಡಿ.ಬಿ.ಟಿ ಮೂಲಕ ವಿತರಿಸಲು ಉದ್ದೇಶಿಸಲಾಗಿದೆ. ಈ ಉದ್ದೇಶಕ್ಕೆ ಐದು ಕೋಟಿ ರೂ. ಅನುದಾನ ಮೀಸಲಿರಿಸಿದೆ."**

ಅದರಂತೆ, ಉದ್ದೇಶಿತ "ಶ್ರೀ ಮಾತಾ ವೈಷ್ಣೋದೇವಿ" ಯಾತ್ರೆ ಯೋಜನೆಯನ್ನು 2026-27ನೇ ಸಾಲಿನಿಂದ ಅನುಷ್ಠಾನಗೊಳಿಸಿ, ಶ್ರೀ ವೈಷ್ಣೋದೇವಿ ಯಾತ್ರೆಯನ್ನು ಕೈಗೊಳ್ಳುವ ಯಾತ್ರಾರ್ಥಿಗಳಿಗೆ ಸಹಾಯಧನ ಪಾವತಿಸಲು ಕ್ರಮ ಕೈಗೊಳ್ಳಲಾಗುತ್ತದೆ.

**ಕರ್ನಾಟಕ ರಾಜ್ಯದಿಂದ ಪುಣ್ಯಕ್ಷೇತ್ರಗಳಿಗೆ ಪ್ರವಾಸ ಕೈಗೊಳ್ಳಲು ಅನುಕೂಲವಾಗುವಂತೆ ರಿಯಾಯಿತಿ ದರದಲ್ಲಿ ಈ ಕೆಳಕಂಡ ಪ್ಯಾಕೇಜುಗಳನ್ನು ರೂಪಿಸಿ ಅನುಷ್ಠಾನಗೊಳಿಸಲಾಗಿರುತ್ತದೆ:**

2023-24ನೇ ಸಾಲಿನಿಂದ ಜಾರಿಗೆ ಬರುವಂತೆ ಕರ್ನಾಟಕ ರಾಜ್ಯದಿಂದ ಪುಣ್ಯ ಕ್ಷೇತ್ರಗಳಿಗೆ ಕಡಿಮೆ ವೆಚ್ಚದಲ್ಲಿ ತೆರಳಲು ಅನುಕೂಲವಾಗುವಂತೆ ರಿಯಾಯ್ತಿ ದರದಲ್ಲಿ ಪ್ಯಾಕೇಜ್ ರೂಪಿಸಿದ್ದು, "ಕರ್ನಾಟಕ ಭಾರತ್ ಗೌರವ್ ಯೋಜನೆಯನ್ನು IRCTC ಮತ್ತು ಭಾರತೀಯ ರೈಲ್ವೇ ಇಲಾಖೆಯ ಸಹಯೋಗದೊಂದಿಗೆ ಧಾರ್ಮಿಕ ದತ್ತಿ ಇಲಾಖೆಯ ವತಿಯಿಂದ ವಿಶೇಷ ರೈಲಿನ ಮೂಲಕ ಪ್ರವಾಸವನ್ನು ಕೈಗೊಳ್ಳಲಾಗುತ್ತಿದೆ. ಈ ವಿಶೇಷ ರೈಲಿನಲ್ಲಿ ತೆರಳುವ ಯಾತ್ರಾರ್ಥಿಗಳಿಗೆ, ಉಪಹಾರ, ಊಟ, ತಂಗುವಿಕೆ, ಸ್ಥಳೀಯ ಸಾರಿಗೆ, ಸಾಮಾನ್ಯ ಔಷಧಿ ವೆಚ್ಚ ಮತ್ತು ಸ್ಥಳೀಯ ವೀಕ್ಷಣೆ ಒಳಗೊಂಡಿರುತ್ತದೆ.

"ಕರ್ನಾಟಕ ಭಾರತ್ ಗೌರವ್ ಕಾಶಿ-ಗಯಾ ದರ್ಶನ" ಯೋಜನೆಯಡಿ ವಾರಣಾಸಿ, ಅಯೋಧ್ಯೆ ಪ್ರಯಾಗ್ ರಾಜ್ ಮತ್ತು ಗಯಾ ಕ್ಷೇತ್ರಗಳಿಗೆ ಪ್ರಯಾಣಿಸುವ ಯಾತ್ರಾರ್ಥಿಗಳಿಗೆ ತಲಾ ರೂ.32,500/- ಗಳಂತೆ ಪ್ಯಾಕೇಜ್ ರೂಪಿಸಿದ್ದು, ಈ ಮೊತ್ತದಲ್ಲಿ ಯಾತ್ರಾರ್ಥಿಗಳಿಗೆ ಒದಗಿಸುವ ಸೌಲಭ್ಯಗಳ ವೆಚ್ಚಗಳನ್ನೊಳಗೊಂಡಂತೆ ತಲಾ ರೂ.17,500/- ಗಳನ್ನು ರಾಜ್ಯ ಸರ್ಕಾರದ ವತಿಯಿಂದ ಭರಿಸಿ, ಉಳಿದ ಮೊತ್ತ ರೂ.15000/-ಗಳನ್ನು ಯಾತ್ರಾರ್ಥಿಗಳು ಪಾವತಿಸಬೇಕಾಗಿರುತ್ತದೆ.

"ಕರ್ನಾಟಕ ಭಾರತ್ ಗೌರವ್ ದಕ್ಷಿಣ ಯಾತ್ರೆ" ಯೋಜನೆಯಡಿ ಯಾತ್ರಾ ಸ್ಥಳಗಳಾದ ರಾಮೇಶ್ವರ, ಕನ್ಯಕುಮಾರಿ, ಮಧುರೈ ಮತ್ತು ತಿರುವನಂತಪುರಂ ಕ್ಷೇತ್ರಗಳಿಗೆ ರೈಲ್ವೆ ಇಲಾಖೆಯ ಸಹಯೋಗದೊಂದಿಗೆ ಧಾರ್ಮಿಕ ದತ್ತಿ ಇಲಾಖೆ ವತಿಯಿಂದ ಯಾತ್ರೆಯನ್ನು ಆಯೋಜಿಸಲಾಗಿದೆ. ಈ ಯೋಜನೆಯಡಿ ಪ್ರಯಾಣಿಸುವ ಯಾತ್ರಾರ್ಥಿಗಳಿಗೆ ತಲಾ ರೂ.25,000/- ಗಳಂತೆ ಪ್ಯಾಕೇಜ್ ರೂಪಿಸಿದ್ದು, ಈ ಮೊತ್ತದಲ್ಲಿ ಯಾತ್ರಾರ್ಥಿಗಳಿಗೆ ಒದಗಿಸುವ ಸೌಲಭ್ಯಗಳ ವೆಚ್ಚಗಳನ್ನೊಳಗೊಂಡಂತೆ ತಲಾ ರೂ.15,000/-ಗಳನ್ನು ರಾಜ್ಯ ಸರ್ಕಾರದ ವತಿಯಿಂದ ಭರಿಸಿ ಉಳಿದ ಮೊತ್ತ ರೂ.10,000/-ಗಳನ್ನು ಯಾತ್ರಾರ್ಥಿಗಳು ಪಾವತಿಸಬೇಕಾಗಿರುತ್ತದೆ.

"ಭಾರತ್ ಗೌರವ್ ದ್ವಾರಕ ಯಾತ್ರಾಯೋಜನೆಯಡಿ ದ್ವಾರಕಾ, ನಾಗೇಶ್ವರ, ಸೋಮನಾಥ್, ತ್ರಯಂಬಕೇಶ್ವರ ಕ್ಷೇತ್ರಗಳಿಗೆ ರೈಲ್ವೆ ಇಲಾಖೆಯ ಸಹಯೋಗದೊಂದಿಗೆ ಧಾರ್ಮಿಕ ದತ್ತಿ ಇಲಾಖೆ ವತಿಯಿಂದ 8 ದಿನಗಳ ಯಾತ್ರೆಯನ್ನು ಆಯೋಜಿಸಲಾಗಿದೆ. ಈ ಯೋಜನೆಯಡಿ ಪ್ರಯಾಣಿಸುವ ಯಾತ್ರಾರ್ಥಿಗಳಿಗೆ ತಲಾ ರೂ.32,500/- ಗಳಂತೆ ಪ್ಯಾಕೇಜ್ ರೂಪಿಸಿದ್ದು, ಈ ಮೊತ್ತದಲ್ಲಿ ಯಾತ್ರಾರ್ಥಿಗಳಿಗೆ ಒದಗಿಸುವ ಸೌಲಭ್ಯಗಳ ವೆಚ್ಚಗಳನ್ನೊಳಗೊಂಡಂತೆ ತಲಾ ರೂ.17,500/- ಗಳನ್ನು ರಾಜ್ಯ ಸರ್ಕಾರದ ವತಿಯಿಂದ ಭರಿಸಿ ಉಳಿದ ಮೊತ್ತ ರೂ.15,000/-ಗಳನ್ನು ಯಾತ್ರಾರ್ಥಿಗಳು ಪಾವತಿಸಬೇಕಾಗಿರುತ್ತದೆ.

ಭಾರತ್ ಗೌರವ್ ಪುರಿ ಜಗನ್ನಾಥ ದರ್ಶನ ಯಾತ್ರೆ ಯೋಜನೆಯಡಿ ಪುರಿ, ಕೊನಾರ್ಕ್ ಗಂಗಾ ಸಾಗರ್, ಕೊಲ್ಕತ್ತಾ ಕ್ಷೇತ್ರಗಳಿಗೆ ರೈಲ್ವೆ ಇಲಾಖೆಯ ಸಹಯೋಗದೊಂದಿಗೆ ಧಾರ್ಮಿಕ ದತ್ತಿ ಇಲಾಖೆ ವತಿಯಿಂದ 8 ದಿನಗಳ ಯಾತ್ರೆಯನ್ನು ಆಯೋಜಿಸಲಾಗಿದೆ. ಈ ಯೋಜನೆಯಡಿ ಪ್ರಯಾಣಿಸುವ ಯಾತ್ರಾರ್ಥಿಗಳಿಗೆ ತಲಾ ರೂ.32,500/- ಗಳಂತೆ ಪ್ಯಾಕೇಜ್ ರೂಪಿಸಿದ್ದು, ಈ ಯೋಜನೆಯಡಿ ಪ್ರಯಾಣಿಸುವ ಯಾತ್ರಾರ್ಥಿಗಳಿಗೆ ಒದಗಿಸುವ ಸೌಲಭ್ಯಗಳ ವೆಚ್ಚಗಳನ್ನೊಳಗೊಂಡಂತೆ ತಲಾ ರೂ.17,500/- ಗಳನ್ನು ರಾಜ್ಯ ಸರ್ಕಾರದ ವತಿಯಿಂದ ಭರಿಸಿ ಉಳಿದ ಮೊತ್ತ ರೂ. 15,000/-ಗಳನ್ನು ಯಾತ್ರಾರ್ಥಿಗಳು ಪಾವತಿಸಬೇಕಾಗಿರುತ್ತದೆ.

**ಸಂಖ್ಯೆ:ಕಂಇ 60 ಮುಸಪ್ರ 2026**

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು